**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

# **O.S. No.** 229/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಗಿರೀಶ |
| ತಂದೆಯ ಹೆಸರು | : | ರುದ್ರಪ್ಪ |
| ವಯಸ್ಸು | : | 41 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಮಾದನಹಳ್ಳಿ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 04.07.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀಮತಿ. ಸಿ.ಎಂ.ವಿ. ವಕೀಲರಿಂದಃ**

ವಾದಿ ನನ್ನ ತಾಯಿಯಾಗಿದ್ದು, ನನ್ನ ಪರವಾಗಿ ಒಂದು ಸಾಮಾನ್ಯ ಮುಖ್ತ್ಯಾರ್ ನಾಮೆಯನ್ನು ಬರೆದುಕೊಟ್ಟಿರುತ್ತಾರೆ. ಆದ್ದರಿಂದ ನಾನು ಈ ಪ್ರಕರಣದಲ್ಲಿ ವಾದಿಯ ಮುಖ್ತ್ಯಾರ್ ನಾಮೆದಾರನಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ನನ್ನ ತಾಯಿ ಬರೆದುಕೊಟ್ಟಿರುವ ಮುಖ್ತ್ಯಾರ್ ನಾಮೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ಸ.ನಂ. 29 ಮತ್ತು ಸ.ನಂ. 11ಕ್ಕೆ ಸಂಬಂಧಿಸಿದ ಕೈ-ಬರವಣಿಗೆಯ 02 ಪಹಣಿ ಪತ್ರಿಕೆಗಳ ಧೃಡೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-2 ಮತ್ತು ನಿ.ಪಿ.-3 ಎಂದು ಗುರುತಿಸಲಾಯಿತು.

**ಪಿ.ಡಬ್ಲ್ಯು-01**

ಸ.ನಂ. 11/1 ಕ್ಕೆ ಸಂಬಂಧಿಸಿದ 10 ಪುಟಗಳುಳ್ಳ ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-4 ಎಂದು ಗುರುತಿಸಲಾಯಿತು.

ಸ.ನಂ. 29 ಕ್ಕೆ ಸಂಬಂಧಿಸಿದ 32 ಪುಟಗಳುಳ್ಳ ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-5 ಎಂದು ಗುರುತಿಸಲಾಯಿತು.

02 ಮ್ಯುಟೇಷನ್ ರಿಜಿಸ್ಟರ್ ಪ್ರತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.-6 ಮತ್ತು ನಿ.ಪಿ.-7 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**